/244670/2022

<u>ಇವರಿಗೆ:-</u>

1. ಪ್ರಧಾನ ಮಹಾಲೇಖಪಾಲರು (ಜಿ &ಎಸ್.ಎಸ್.ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು, (ಇ & ಆರ್.ಎಸ್.ಎ),ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಎ & ಇ),ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು-560001.
4. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
5. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
6. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
7. ಹಿರಿಯ ನಿರ್ದೇಶಕರು ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಯೋಜನಾ ಇಲಾಖೆ (ಮಾನವ ಅಭಿವೃದ್ಧಿ ವಿಭಾಗ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 4&5) ವಿಧಾನಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

<u>ಪ್ರತಿ:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ. ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ-2 ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ. ವಿಕಾಸಸೌಧ, ಬೆಂಗಳೂರು.

HFW 70/2022

Planning

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: 2022-23ನೇ ಸಾಲಿನ ಆಯವ್ಯಯದ ಭಾಷಣದ ಕಂಡಿಕೆ 118 ರಲ್ಲಿ ಘೋಷಿಸಿರುವ ಅಪಘಾತಕ್ಕೊಳಗಾದ ರೋಗಿಗಳಿಗೆ ಆಸ್ಪತ್ರೆಗೆ ದಾಖಲಾದ 48 ಗಂಟೆಗಳೊಳಗಾಗಿ 76 ಅವಶ್ಯ ಜೀವ ರಕ್ಷಕ ಆರೋಗ್ಯ ಸೇವೆಗಳನ್ನು ಒದಗಿಸುವ ಮಾರ್ಪಡಿತ ಮುಂದುವರೆದ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ

ಓದಲಾಗಿದೆ:

1. ಮಾನ್ಯ ಮುಖ್ಯಮಂತ್ರಿಯವರ 2022-23ನೇ ಆಯವ್ಯಯ ಭಾಷಣದ ಖಂಡಿಕೆ 118
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲಾಣ ಸೇವೆಗಳು ಇವರ ಏಕ ಕಡತ ಸಂಖ್ಯೆ:ಪಿ.ಎಲ್.ಎನ್(2)/12/10/2021-22

*****

<u>ಪ್ರಸ್ತಾವನೆ:</u>

ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ 2022-23ನೇ ಸಾಲಿನ ಆಯವ್ಯಯ ಭಾಷಣದ ಖಂಡಿಕೆ 118 ರಲ್ಲಿ ಅಪಘಾತಕೊಳಗಾದ ರೋಗಿಗಳಿಗೆ ಆಸ್ಪತ್ರೆಗೆ ದಾಖಲಾದ 48 ಗಂಟೆಗಳೊಳಗಾಗಿ 76 ಅವಶ್ಯ ಜೀವ ರಕ್ಷಕ ಆರೋಗ್ಯ ಸೇವೆಗಳನ್ನು ಒದಗಿಸುವ ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ಪ್ರಾರಂಭಿಸಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಆಯುಕ್ತರು, ಆಕುಕ ಸೇವೆಗಳು ಇವರಿಂದ ಸ್ವೀಕೃತವಾದ ಏಕ ಕಡತದಲ್ಲಿ ಅಪಘಾತಕೊಳಗಾದ ರೋಗಿಗಳು ಆಸ್ಪತ್ರೆಗೆ ದಾಖಲಾದ 48 ಗಂಟೆಯೊಳಗೆ ಅವಶ್ಯ ಜೀವ ರಕ್ಷಕ ಆರೋಗ್ಯ ಸೇವೆಯ ಒದಗಿಸಲು ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕದ ಮಾರ್ಪಾಡಿತ ಮುಂದುವರೆದ ಯೋಜನೆಯಾಗಿದ್ದು, ಇದರಲ್ಲಿ 76 ಚಿಕಿತ್ಸಾ ವಿಧಾನಗಳನ್ನು ಗುರುತಿಸಲಾಗಿದೆ. ಬಿಪಿಎಲ್ ಹಾಗೂ ಎಪಿಎಲ್‌ನ ಫಲಾನುಭವಿಗಳಿಗೆ ನಗದು ರಹಿತ ಚಿಕಿತ್ಸೆ ಒದಗಿಸುವುದು ಯೋಜನೆಯ ಉದ್ದೇಶವಾಗಿರುತ್ತದೆ.

ಈ ಯೋಜನೆಯ ಅಡಿಯಲ್ಲಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳು (ಜಿಲ್ಲಾ, ತಾಲ್ಲೂಕು ಮಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರಗಳು), ರಾಜ್ಯದ ಎಲ್ಲಾ ಮೆಡಿಕಲ್ ಕಾಲೇಜ್ ಗಳು (ಖಾಸಗಿ ಮತ್ತೆ ಸಾರ್ವಜನಿಕ), ಟ್ರಸ್ಟ್ ನಡಿ ನೊಂದಾವಣೆಯಾದ ಎಲ್ಲಾ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಸೂಕ್ತ ಆದೇಶ ಹೊರಡಿಸುವಂತೆ ಕೋರಲಾಗಿದೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಆಕುಕ 102 ಸಿಜಿಇ 2022</u>
<u>ಬೆಂಗಳೂರು, ದಿನಾಂಕ: 08.04.2022</u>

ರಾಜ್ಯದಲ್ಲಿ ಅಪಘಾತಕೊಳಗಾದ ಬಿಪಿಎಲ್ ಹಾಗೂ ಎಪಿಎಲ್ ರೋಗಿಗಳಿಗೆ ಆಸ್ಪತ್ರೆಗೆ ದಾಖಲಾದ 48 ಗಂಟೆಗಳೊಳಗಾಗಿ, 76 ಅವಶ್ಯ ಜೀವ ರಕ್ಷಕ ಆರೋಗ್ಯ ಸೇವೆಗಳನ್ನು ಅನುಮೋದಿತ ಪ್ಯಾಕೇಜ್ ದರಗಳನ್ನಯ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರಡಿ ನಿಗದಿಪಡಿಸಿರುವ ಅನುದಾನದಲ್ಲಿ ಒದಗಿಸಲು ಅನುಮೋದನೆಯನ್ನು ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 300 ವೆಚ್ಚ-5/2022, ದಿನಾಂಕ:08.04..2022ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಯೋಜನಾ ಇಲಾಖೆಯ ಸಹಮತಿಯನ್ನು ನಿರೀಕ್ಷಿಸಿ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪದ್ಮ. ವಿ) 08/4/2022
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲಾಣ ಇಲಾಖೆ,
(ಆರೋಗ್ಯ

1&2)